**<u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು</u>**

ದಿನಾಂಕಃ 17 ನೇ ಫೆಬ್ರವರಿ ತಿಂಗಳು 2026ರಂದು

**<u>ಸಿಸಿ ನಂ.1049/2025</u>**

**ಫಿರ್ಯಾದುದಾರರುಃ** ಸರಕಾರ (ಹುಣಸೂರು ಪಟ್ಟಣ ಪೊಲೀಸರಿಂದ)

– ವಿರುದ್ಧ –

**ಆರೋಪಿಃ** ದಸ್ತಗೀರ್.

**ಶ್ರೀಮತಿ ಅನಿತ, ಬಿ.ಎ.(ಲಾ), ಎಲ್.ಎಲ್.ಬಿ., ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ಹುಣಸೂರು ಆದ ನಾನು ಈ ಕೆಳಗೆ ಕಾಣಿಸಿರುವಃ**

ದಸ್ತಗೀರ್., ಬಿನ್ ಯೂಸಫ್,
46 ವರ್ಷ, ವ್ಯಾಪಾರಸ್ಥರು,
ವಾಸಃ ನಂ.693 ಸುಫಿಯಾ ಹೈಸ್ಕೂಲ್ ,
ಶಬ್ಬೀರ್ ನಗರ, ಹುಣಸೂರು ಟೌನ್.

**<u>ದೋಷಾರೋಪಣೆ</u>**

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 05.08.2025ರಂದು ಸಂಜೆ 7.00 ಗಂಟೆ ಸಮಯದಲ್ಲಿ ಹುಣಸೂರು ಪಟ್ಟಣ ಪೊಲೀಸ್ ಠಾಣಾ ಸರಹದ್ದಾದ ಕಿರಿಜಾಜಿ – ಸಿದ್ದನಕೊಪ್ಪಲು ಕ್ರಾಸ್ ಬಳಿ ಆರೋಪಿಯಾದ ನೀವು ಕೆಎ–45/ಇಇ–7173 ಟಿವಿಎಸ್ ಜೂಪಿಟರ್ ಸ್ಕೂಟ್ ಬೈಕ್ ನಲ್ಲಿ ಚಾಸಾ.2 ನಜೀಮಾ ಬಾನುರವರನ್ನು ಹಿಂಬದಿಯಲ್ಲಿ ಕೂರಿಸಿಕೊಂಡು ಶಬ್ಬೀರ್ ನಗರ ಕಡೆಯಿಂದ ಕಟ್ಟೆಮಳಲವಾಡಿ ಗ್ರಾಮದ ಕಡೆಗೆ ಹೋಗುತ್ತಿದ್ದಾಗ ಸ್ಕೂಟಿಯನ್ನು ನೀವು ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದಿರುತ್ತೀರಿ ಎಂದು

ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 281 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ವಿವರಿಸಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಸಡನ್ ಆಗಿ ಒಂದು ಬೆಕ್ಕು ರಸ್ತೆಗೆ ಅಡ್ಡಲಾಗಿ ಓಡಿ ಬಂದಿದ್ದರಿಂದ ಬೆಕ್ಕಿಗೆ ಡಿಕ್ಕಿಪಡಿಸುವುದನ್ನು ತಪ್ಪಿಸಲು ನೀವು ಬೈಕ್ ಗೆ ಸಡನ್ ಆಗಿ ಬ್ರೇಕ್ ಹಾಕಿದ್ದರಿಂದ ಬೈಕ್ ನಿಯಂತ್ರಣ ತಪ್ಪಿ ನೀವು ಮತ್ತು ಚಾಸಾ.2ರವರು ಬೈಕ್ ಸಮೇತ ಕೆಳಕ್ಕೆ ಬಿದ್ದಾಗ ಚಾಸಾ.2ರವರ ಎರಡು ಮಂಡಿಯ ಬಳಿ ತೀವ್ರ ಸ್ವರೂಪದ ಗಾಯಪಡಿಸಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.125(ಬಿ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಾಣಿಸಿದ ಆರೋಪಣೆಯ ಬಗ್ಗೆ ನಿಮ್ಮನ್ನು ಈ ನ್ಯಾಯಾಲಯದ ಮುಂದೆ ವಿಚಾರಣೆಗೆ ಗುರಿಪಡಿಸುತ್ತೇನೆ ಎಂದು ಈ ಮೂಲಕ ಆಜ್ಞೆ ಮಾಡುತ್ತಿದ್ದೇನೆ.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ANITHA

Digitally signed by ANITHA
Date: 2026.02.17 18:01:18 +0530

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು.**

**ಸಿಸಿ ನಂ.1341/2025**

**ಆರೋಪಿ ನಂ.1**

ಆಪಾದಿತನ ಹೆಸರು : ದಸ್ತಗೀರ್.,
ತಂದೆಯ ಹೆಸರು : ಯೂಸಫ್ ,
ವಯಸ್ಸು : 46 ವರ್ಷ,
ಉದ್ಯೋಗ : ವ್ಯಾಪಾರಸ್ಥರು
ವಾಸಸ್ಥಳ : ನಂ.693 ಸುಫಿಯಾ ಹೈಸ್ಕೂಲ್ ,
ಶಬ್ಬೀರ್ ನಗರ, ಹುಣಸೂರು ಟೌನ್.,

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ 234ರ ಅಡಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1 : | ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆ 2 : | ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ? |
| ಉತ್ತರಃ | ತಪ್ಪು ಒಪ್ಪಿಕೊಳ್ಳುತ್ತೇನೆ. |

ಮೇಲ್ಕಾಣಿಸಿದ ಹೇಳಿಕೆಯನ್ನು ದಿನಾಂಕಃ 17.02.2026 ರಂದು ನನ್ನ ಉಪಸ್ಥಿತಿಯಲ್ಲಿ ಆರೋಪಿಯಿಂದ ಪಡೆಯಲಾಗಿದ್ದು, ಸದರಿ ಹೇಳಿಕೆಯು ಆರೋಪಿಯು ಕೊಟ್ಟ ನಿಜವಾದ ಹೇಳಿಕೆಯಾಗಿದೆ.

ANITHA
Digitally signed by ANITHA
Date: 2026.02.17 18:01:23 +0530

Sd/-
(ಅನಿತ)
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ಹುಣಸೂರು.**

**ಆರೋಪಿಯ ಸಹಿಃ**